# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಗೋವಿಂದ ರಾಜು (ವಿಧಾನ ಸಭಾ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1177** |
| ಉತ್ತರಿಸಬೇಕಾದ ದಿನಾಂಕ | : | 17.12.2025 |
| ಉತ್ತರಿಸಬೇಕಾದ ಸಚಿವರು | : | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೋಲಾರ ಜಿಲ್ಲೆ, ಕೋಲಾರ ನಗರದ ಹಾರೋಹಳ್ಳಿ ಬಡಾವಣೆಯಲ್ಲಿ ಕರ್ನಾಟಕ ಗೃಹ ಮಂಡಳಿಯಿಂದ 2 ನೇ ಹಂತದ ವಸತಿ ಬಡಾವಣೆ ನಿರ್ಮಾಣ ಮಾಡುತ್ತಿರುವುದು ನಿಜವೇ; (ಪೂರ್ಣ ವಿವರಗಳನ್ನು ಒದಗಿಸುವುದು) | ಹೌದು<br><br>ಕೋಲಾರ ಜಿಲ್ಲೆ, ಕೋಲಾರ ತಾಲ್ಲೂಕು ಹಾರೋಹಳ್ಳಿ ಗ್ರಾಮದ ಸರ್ವೆ ನಂಬರ್ 75 ರಲ್ಲಿ ಕರ್ನಾಟಕ ಗೃಹ ಮಂಡಳಿ ವತಿಯಿಂದ 6 ಎಕರೆ 21 ಗುಂಟೆ ವಿಸ್ತೀರ್ಣದ ಜಮೀನಿನಲ್ಲಿ ಬಡಾವಣೆಯನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ. |
| ಆ) | ಈ ವಸತಿ ಬಡಾವಣೆಯನ್ನು ಯಾವ ವರ್ಷದಲ್ಲಿ ಪ್ರಾರಂಭಿಸಲಾಯಿತು ಹಾಗೂ ಪ್ರಸ್ತುತ ಯಾವ ಹಂತದಲ್ಲಿದೆ; | ಈ ವಸತಿ ಬಡಾವಣೆಯನ್ನು ದಿನಾಂಕ:04.04.2022 ರಂದು ಪ್ರಾರಂಭಿಸಲಾಗಿದ್ದು, ಪ್ರಸ್ತುತ ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡಿದ್ದು, ಬಡಾವಣೆಯ ರಸ್ತೆ ಡಾಂಬರೀಕರಣ ಕಾಮಗಾರಿಯು ಪ್ರಗತಿಯಲ್ಲಿದ್ದು, ಕಾಮಗಾರಿಗಳು ಮುಕ್ತಾಯದ ಹಂತದಲ್ಲಿರುತ್ತವೆ. |
| ಇ) | ಈ ಬಡಾವಣೆಯ ಕಾಮಗಾರಿಗಳನ್ನು ಪ್ರಾರಂಭಿಸಿ 4 ವರ್ಷಗಳು ಕಳೆದಿದ್ದರೂ, ಈವರೆಗೆ ಪೂರ್ಣಗೊಳಿಸದೆ ಯಿರುವುದರಿಂದ, ಇದನ್ನು ಹೊಂದಿ ಕೊಂಡಂತೆ ಇರುವ ನಿವಾಸಿಗಳಿಗೆ ಬಹಳ ಕಷ್ಟಕರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಯಾವ ಕಾಲಮಿತಿಯೊಳಗೆ | ಸದರಿ ಜಮೀನಿಗೆ ಹೊಂದಿಕೊಂಡ ಖಾಸಗಿ ಭೂಮಾಲೀಕರು ಜಮೀನಿನ ಗಡಿ ಬಗ್ಗೆ ತಕರಾರು ತೆಗೆದು ಕಾಮಗಾರಿ ಪ್ರಾರಂಭಿಸಲು ಅಡ್ಡಿಪಡಿಸಿದ ಕಾರಣ ಸಕಾಲದಲ್ಲಿ ಕಾಮಗಾರಿ ಕೈಗೊಳ್ಳಲು ಸಾಧ್ಯವಾಗಿರುವುದಿಲ್ಲ.<br><br>ಮಂಡಳಿ ಬಡಾವಣೆಗೆ ಹೊಂದಿಕೊಂಡ ನಿವಾಸಿಗಳು/ಭೂಮಾಲೀಕರು ಪದೇ ಪದೇ ಜಮೀನಿನ ಹದ್ದುಬಸ್ತು ವಿಚಾರವಾಗಿ ತಕರಾರು ತೆಗೆದು ಕಾಮಗಾರಿಗೆ ಅಡ್ಡಿಪಡಿಸುತ್ತಿದ್ದ ಕಾರಣ, ಪೊಲೀಸ್ ಇಲಾಖೆಯಿಂದ ಬಂದೋಬಸ್ತು |

| | | |
|---|---|---|
| | ಇದನ್ನು ಪೂರ್ಣಗೊಳಿಸಲಾಗುವುದು ? | ಪಡೆದು, ತಹಶೀಲ್ದಾರ್ ಕೋಲಾರ ರವರಿಂದ ಗಡಿ ಗುರುತು ಮಾಡಿಸಿಕೊಂಡು ಕಾಮಗಾರಿ ನಿರ್ವಹಿಸಲಾಗಿದೆ.<br><br>ಪ್ರಸ್ತುತ, ಬಡಾವಣೆಯ ರಸ್ತೆ ಡಾಂಬರೀಕರಣ ಕಾಮಗಾರಿಯು ಪ್ರಗತಿಯಲ್ಲಿದ್ದು, ಕಾಮಗಾರಿಗಳು ಮುಕ್ತಾಯದ ಹಂತದಲ್ಲಿರುತ್ತವೆ. ಜನವರಿ 2026ರ ಅಂತ್ಯದೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು |

**(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು

ಸಂಖ್ಯೆ :ವಇ 235 ಕಗೃಮಂ 2025